ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

2019-20ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

370 (473) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 2019-20ನೇ ಸಾಲಿಗೆ ಸರ್ಕಾರ ಸೂಚಿಸಿರುವಂತೆ ರೂ.2.00 ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆಯನ್ನು ಈಗಾಗಲೇ ಸಲ್ಲಿಸಿರುವ ಮಾನ್ಯ ಎಲ್ಲಾ ಶಾಸಕರುಗಳು ಸೂಚಿಸಿರುವ ಎಲ್ಲಾ ಕಾಮಗಾರಿಗಳಿಗೆ ಒಟ್ಟು ರೂ.2.00 ಕೋಟಿ ರೂಪಾಯಿ ಅನುದಾನವನ್ನು ನೀಡಲಾಗಿದೆಯೇ;

(ಆ) ಇದುವರೆಗೂ ರೂ.2.00 ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳ ಕ್ರಿಯಾಯೋಜನೆಯನ್ನು ಸಲ್ಲಿಸಿ, ಈಗಾಗಲೇ ಮಾನ್ಯ ಶಾಸಕರುಗಳು ಸೂಚಿಸಿರುವ ಹಲವಾರು ಕಾಮಗಾರಿಗಳಿಗೆ ಇದುವರೆಗೂ ಅನುದಾನ ಒದಗಿಸದಿರಲು ಕಾರಣಗಳೇನು;

(ಇ) 2019-20ನೇ ಸಾಲಿಗೆ ಮಾನ್ಯ ಶಾಸಕರು ನೀಡಿರುವ ರೂ.2.00 ಕೋಟಿ ರೂಪಾಯಿ ಮೊತ್ತದ ಅನುದಾನವನ್ನು ಯಾವಾಗ ನೀಡಲಾಗುವುದು;

(ಈ) ಯಾವ ಕಾಲಮಿತಿಯೊಳಗೆ ಸದರಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು?